# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1030 (1025)

ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್,
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 22.09.2022

ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಐ.ಎಂ.ಎ. ಹಗರಣದಲ್ಲಿ ಭಾಗಿಯಾದ ಐಪಿಎಸ್ ಅಧಿಕಾರಿಗಳನ್ನು ಅಮಾನತ್ತುಗೊಳಿಸಲಾಗಿದೆಯೇ; ಇಲ್ಲವಾದಲ್ಲಿ ಯಾವಾಗ ಅಮಾನತ್ತುಗೊಳಿಸಲಾಗುವುದು; | ಅಮಾನತ್ತುಗೊಳಿಸಲಾಗಿರುವುದಿಲ್ಲ.<br><br>ಆರೋಪಿತ ಅಧಿಕಾರಿಗಳ ವಿರುದ್ಧ ಪ್ರಕರಣಗಳು ಈಗಾಗಲೇ ನ್ಯಾಯಲಯದಲ್ಲಿ ಬಾಕಿ ಇರುತ್ತವೆ. ನ್ಯಾಯಲಯದ ನಿರ್ದೇಶನಗಳಂತೆ ಕ್ರಮ ಕೈಗೊಳ್ಳಬೇಕಾಗುತ್ತದೆ. |
| ಆ) | ಐ.ಎಂ.ಎ. ಹಗರಣದಲ್ಲಿ ಭಾಗಿಯಾದ ಕೆಳಗಿನ ಹಂತದ ಅಧಿಕಾರಿಗಳನ್ನು ಅಮಾನತ್ತು ಮಾಡಿರುವ ಸರ್ಕಾರ ಅದೇ ರೀತಿಯ ಆರೋಪ ಹೊತ್ತಿರುವ ಮತ್ತು ಈ ಹಗರಣಕ್ಕೆ ಪ್ರಮುಖ ಬೆಂಗಲಿಗರಾದ ಐಪಿಎಸ್ ಅಧಿಕಾರಿಗಳನ್ನು ಅಮಾನತ್ತುಗೊಳಿಸದಿರಲು ಕಾರಣವೇನು; ಇದರಿಂದಾಗಿ ತನಿಖೆಯಲ್ಲಾಗುವ ವಿಳಂಬ/ ಅವ್ಯವಹಾರಕ್ಕೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು; (ವಿವರ ನೀಡುವುದು) | ಪ್ರಕರಣದ ತನಿಖೆಯನ್ನು ಸಿಬಿಐ ಸಂಸ್ಥೆಗೆ ವಹಿಸಲಾಗಿತ್ತು. ತನಿಖಾ ಸಂಸ್ಥೆಯು ಶಿಫಾರಸ್ಸಿನಂತೆ ಕ್ರಮಗಳನ್ನು ಕೈಗೊಳ್ಳಲಾಗಿದೆ. |
| ಇ) | ಭ್ರಷ್ಟಾಚಾರ ಎಸಗಿದ ಈ ಅಧಿಕಾರಿಗಳನ್ನು ಕಡ್ಡಾಯ ನಿವೃತ್ತಿಗೊಳಿಸುವ ಕುರಿತು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆಯೇ; ಇಲ್ಲವಾದಲ್ಲಿ ಯಾವಾಗ ಪತ್ರ ಬರೆಯಲಾಗುವುದು; ಈ ಭ್ರಷ್ಟ ಅಧಿಕಾರಿಗಳನ್ನು ಕಡ್ಡಾಯ ನಿವೃತ್ತಿಗೊಳಿಸುವ ಕುರಿತು ಸರ್ಕಾರದ ನಿಲುವೇನು; | ಇಲ್ಲ.<br><br>ಇಲಾಖಾ ವಿಚಾರಣೆ ಮತ್ತು ನ್ಯಾಯಾಲಯಗಳಲ್ಲಿ ಪ್ರಕರಣ ಬಾಕಿ ಇರುವುದರಿಂದ ಈ ವಿಚಾರಣೆ ಅಂತಿಮಗೊಂಡ ನಂತರ ಕ್ರಮ ಕೈಗೊಳ್ಳಬೇಕಾಗುತ್ತದೆ. |

--2]

| | | |
|---|---|---|
| ಈ) | ಈ ಭ್ರಷ್ಟ ಅಧಿಕಾರಿಗಳ ಕಾರಣದಿಂದಾಗಿ ರಾಜ್ಯದ ಅಲ್ಪಸಂಖ್ಯಾತರು ಸೇರಿದಂತೆ ಮಹಿಳೆಯರು ಅನ್ಯಾಯಕ್ಕೊಳಗಾಗಿದ್ದು, ಈ ಆರ್ಥಿಕ ನಷ್ಟವನ್ನು ಭ್ರಷ್ಟ ಅಧಿಕಾರಿಗಳು ಭ್ರಷ್ಟಾಚಾರ ಎಸಗಿ ಸಂಪಾದಿಸಿದ ಆಸ್ತಿಯನ್ನು ಹರಾಜು ಮಾಡುವ ಮೂಲಕ ಅನ್ಯಾಯಕ್ಕೊಳಗಾದವರಿಗೆ ಪರಿಹಾರ ವಿತರಿಸುವ ಕುರಿತು ಸರ್ಕಾರದ ನಿಲುವೇನು? | ಸದರಿ ಅಧಿಕಾರಿಗಳ ವಿರುದ್ಧ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳಲ್ಲಿನ ಅಂತಿಮ ತೀರ್ಪನ್ನು ಆಧರಿಸಿ ಕ್ರಮ ಕೈಗೊಳ್ಳಬೇಕಾಗುತ್ತದೆ. |

ಸಂಖ್ಯೆ: ಇ-ಸಿಆಸುಇ 296 ಎಸ್‌ಪಿಎಸ್ 2022

(ಬಸವರಾಜ್ ಬೊಮ್ಮಾಯಿ)
ಮುಖ್ಯಮಂತ್ರಿ